**Bangalore**
**Regional News**
**05.01.2026 / 14.30 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

**೧. ಮೈಸೂರಿನಲ್ಲಿ ಹೀಲಿಯಂ ಗ್ಯಾಸ್ ಸಿಲಿಂಡರ್ ಸ್ಫೋಟ ಪ್ರಕರಣ; ಮೃತರ ಕುಟುಂಬಕ್ಕೆ ಐದು ಲಕ್ಷ ರೂಪಾಯಿ ಪರಿಹಾರ ಘೋಷಿಸಿದ ಸರ್ಕಾರ**

**೨. ಬಳ್ಳಾರಿ ಗಲಭೆ ಪ್ರಕರಣ; ೨೬ ಆರೋಪಿಗಳಿಗೆ ನ್ಯಾಯಾಂಗ ಬಂಧನ -ಸಿಬಿಐ ತನಿಖೆಗೆ ಎಚ್.ಡಿ.ಕುಮಾರಸ್ವಾಮಿ ಆಗ್ರಹ**

**೩. ಬೆಂಗಳೂರಿನಲ್ಲಿ ಓಂಶಕ್ತಿ ಭಕ್ತರ ಮೇಲೆ ಕಲ್ಲು ತೂರಾಟ ಪ್ರಕರಣ; ಮೂವರು ಅಪ್ರಾಪ್ತರು ಪೊಲೀಸರ ವಶಕ್ಕೆ**

**೪. ವಾಣಿಜ್ಯ ತೆರಿಗೆ ಅಧಿಕಾರಿಗಳ ಕಾರ್ಯಾಚರಣೆ; ಒಂದು ಸಾವಿರದ ೪೬೪ ಕೋಟಿ ರೂಪಾಯಿ ವಂಚನೆಯ ವಹಿವಾಟು ಪತ್ತೆ**

**<><*<><>*><>**

**ಮೈಸೂರು ಅರಮನೆಯ ಬಳಿ ಹೀಲಿಯಂ ಗ್ಯಾಸ್ ಸಿಲಿಂಡರ್ ಸ್ಫೋಟಗೊಂಡು ಮೃತಪಟ್ಟವರ ಕುಟುಂಬಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ೫ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಳೆ ಮುಖ್ಯಮಂತ್ರಿಯಾಗಿ ಮಾಜಿ ಮುಖ್ಯಮಂತ್ರಿ ದೇವರಾಜ್ ಅರಸ್ ಅವರ ದಾಖಲೆ ಮುರಿಯುತ್ತಿರುವ ಬಗ್ಗೆ ಸಂತಸ ವ್ಯಕ್ತಪಡಿಸಿದ್ದಾರೆ. ಇಬ್ಬರು ಒಂದೇ ಜಿಲ್ಲೆಯಿಂದ ಬಂದವರು ಎಂದು ತಿಳಿಸಿದ್ದಾರೆ. ಇದೇ ವೇಳೆ, ಬಳ್ಳಾರಿ ಗಲಭೆ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಸಿಐಡಿ ತನಿಖೆ ಬಗ್ಗೆ ನಾಳೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರೊಂದಿಗೆ ಚರ್ಚಿಸಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.**

**<><*<><>*><>**

**ಬಳ್ಳಾರಿಯಲ್ಲಿ ಗುಂಡಿನ ಚಕಮಕಿಯಿಂದ ಕಾಂಗ್ರೆಸ್ ಕಾರ್ಯಕರ್ತನ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಜನಪ್ರತಿನಿಧಿಗಳ ನ್ಯಾಯಾಲಯ, ೨೬ ಮಂದಿಗೆ ನ್ಯಾಯಾಂಗ ಬಂಧನ ವಿಧಿಸಿದೆ. ಬಳ್ಳಾರಿಯಿಂದ ಆರೋಪಿಗಳನ್ನು ಈಗಾಗಲೇ ಬೆಂಗಳೂರಿಗೆ ಕರೆತಂದು ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿದೆ. ಆರೋಪಿಗಳನ್ನು ಬೆಂಗಳೂರು ಕೇಂದ್ರ ಕಾರಾಗೃಹಕ್ಕೆ ಸ್ಥಳಾಂತರಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ. ಬಂಧಿತರಲ್ಲಿ ೧೧ ಬಿಜೆಪಿ**

ಕಾರ್ಯಕರ್ತರು ೧೦ ಕಾಂಗ್ರೆಸ್ ಕಾರ್ಯಕರ್ತರು ಸೇರಿದ್ದಾರೆ. ಈಗಾಗಲೇ ಕಾಂಗ್ರೆಸ್ ಶಾಸಕ ನಾರಾ ಭರತ್ ರೆಡ್ಡಿ, ಜನಾರ್ಧನ್ ರೆಡ್ಡಿ, ಶ್ರೀರಾಮುಲು ಅವರ ಗನ್‌ಮ್ಯಾನ್‌ಗಳನ್ನು ಬಂಧಿಸಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಒಟ್ಟು ೯ ಗನ್‌ಮ್ಯಾನ್‌ಗಳನ್ನು ಬಂಧಿಸಲಾಗಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

<><*<><>*><>

ಬಳ್ಳಾರಿಯಲ್ಲಿ ನಡೆದ ಗಲಭೆ ಹಾಗೂ ಕಾಂಗ್ರೆಸ್ ಕಾರ್ಯಕರ್ತನ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಕರಣದ ತನಿಖೆಯಲ್ಲಿ ಹಲವು ಅನುಮಾನಗಳು ಹಾಗೂ ಗಂಭೀರ ಲೋಪಗಳಿಗೆ ಎಂದು ತಿಳಿಸಿದ್ದಾರೆ. ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸುವಂತೆ ಆಗ್ರಹಿಸಿದ್ದಾರೆ. ಸಿಬಿಐ ತನಿಖೆ ಹೊರತುಪಡಿಸಿ, ಉಳಿದ ಯಾವುದೇ ತನಿಖೆಯಿಂದ ನ್ಯಾಯ ಸಿಗುವುದಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಗಲಭೆ ಪ್ರಕರಣದಲ್ಲಿ ಬಳ್ಳಾರಿ ಪೊಲೀಸ್ ವರಿಷ್ಠಾಧಿಕಾರಿಯನ್ನು ಮಾತ್ರ ಅಮಾನತು ಮಾಡಲಾಗಿದೆ. ಉಳಿದ ಹಿರಿಯ ಅಧಿಕಾರಿಗಳಿಗೆ ಬಳ್ಳಾರಿಯ ಹಿನ್ನೆಲೆ ಗೊತ್ತಿಲ್ಲವೇ ಎಂದು ಪ್ರಶ್ನಿಸಿದ್ದಾರೆ. ಜನಾರ್ದನ ರೆಡ್ಡಿಗೆ ಬಳ್ಳಾರಿ ಪ್ರವೇಶಕ್ಕೆ ಅನುಮತಿ ನೀಡಿದ ಬಳಿಕ ಎಷ್ಟು ಗಲಭೆಗಳು ನಡೆದಿವೆ ಎಂಬುದನ್ನು ಸರ್ಕಾರ ಬಹಿರಂಗಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

ಧ್ವನಿ: ಕೇಂದ್ರ ಸಚಿವ ಕುಮಾರಸ್ವಾಮಿ ( ೩೩ ಸೆಕೆಂಡ್ಸ್)

<><*<><>*><>

ಬೆಂಗಳೂರಿನ ಜೆಜೆ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಓಂ ಶಕ್ತಿ ಭಕ್ತರನ್ನು ಗುರಿಯಾಗಿಸಿಕೊಂಡು ಕಲ್ಲು ತೂರಾಟ ನಡೆಸಿದ ಘಟನೆಗೆ ಸಂಬಂಧಿಸಿದಂತೆ ಪೊಲೀಸರು ಇಂದು ಮೂವರು ಅಪ್ರಾಪ್ತ ವಯಸ್ಕರನ್ನು ವಶಕ್ಕೆ ಪಡೆದಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಓಂಶಕ್ತಿ ಭಕ್ತರ ಹೇಳಿಕೆಗಳ ಆಧಾರದ ಮೇಲೆ ಆರೋಪಿಗಳನ್ನು ಬಂಧಿಸಲಾಗಿದೆ. ಘಟನೆಗೆ ಪ್ರಚೋದಿಸಿದವರನ್ನು ಪತ್ತೆಹಚ್ಚಲು ತನಿಖೆ ನಡೆಸಲಾಗುತ್ತಿದೆ ಎಂದು ಹೇಳಿದ್ದಾರೆ. ಇನ್ನುಳಿದ ಆರೋಪಿಗಳನ್ನು ಬಂಧಿಸಲು ವಿಶೇಷ ತಂಡ ರಚಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ರಾಜ್ಯವು ಹಿಂಸಾತ್ಮಕ ಘಟನೆಗಳ ಜೊತೆಗೆ ಅವ್ಯವಸ್ಥೆಗೆ ಸಾಕ್ಷಿಯಾಗುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅತಿ ಹೆಚ್ಚು ಕಾಲ ಮುಖ್ಯಮಂತ್ರಿಯಾಗುವ ಮೂಲಕ ದಾಖಲೆ ಸೃಷ್ಟಿಸುವ ಕನಸು ಕಾಣುತ್ತಿದ್ದಾರೆ.  ಮತ್ತೊಂದೆಡೆ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ದೂರಿದ್ದಾರೆ. ಬಳ್ಳಾರಿ ಹಿಂಸಾಚಾರ, ಬೆಂಗೂರಿನಲ್ಲಿ ಓಂಶಕ್ತಿ ಭಕ್ತರ ಮೆರವಣಿಗೆಯ ಮೇಲೆ ಕಲ್ಲುತೂರಾಟ ಸೇರಿದಂತೆ ಹಲವು ಘಟನೆಗಳು ವರದಿಯಾಗಿದ್ದು, ಇದು ರಾಜ್ಯ ಸರ್ಕಾರದ ವೈಫಲ್ಯಕ್ಕೆ ಸಾಕ್ಷಿಯಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ವಾಣಿಜ್ಯ ತೆರಿಗೆ ಅಧಿಕಾರಿಗಳು ರಾಜ್ಯದಲ್ಲಿ ನಡೆಸಿದ ಬೃಹತ್ ಅಂತಾರಾಜ್ಯ ಕಾರ್ಯಚರಣೆಯಲ್ಲಿ ೧ ಸಾವಿರದ ೪೬೪ ಕೋಟಿ ರೂಪಾಯಿಗಳ ವಂಚನೆಯನ್ನು ಪತ್ತೆಹಚ್ಚಲಾಗಿದೆ. ಸಂಘಟಿತ ಕಾರ್ಯಾಚರಣೆಯಲ್ಲಿ ನಾಲ್ವರನ್ನು ಬಂಧಿಸಲಾಗಿದೆ. ಕರ್ನಾಟಕ ಮತ್ತು ತಮಿಳುನಾಡಿನಾದ್ಯಂತ ಕಾರ್ಯ ನಿರ್ವಹಿಸುತ್ತಿರುವ ತಂಡವೊಂದು ಸಿಮೆಂಟ್, ಕಬ್ಬಿಣ ಮತ್ತು ಉಕ್ಕಿನಂತರ ಕಟ್ಟಡ ಸಾಮಗ್ರಿಗಳ ಒಟ್ಟು ಒಂದು ಸಾವಿರದ ೪೬೪ ಕೋಟಿ ರೂಪಾಯಿಗಳ ವಂಚನೆಯ ವಹಿವಾಟು ನಡೆಸಿದೆ. ಆರೋಪಿಗಳಿಂದ ೨೪ ಮೊಬೈಲ್ ಫೋನ್‌ಗಳು, ೫೪ ಸಿಮ್‌ಕಾರ್ಡ್, ಎರಡು ಪೆನ್‌ಡ್ರೈವ್ ಹಾಗೂ ಬ್ಯಾಂಕ್ ದಾಖಲೆಗಳನ್ನು ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದಾರೆ.

<><*<><>*><>

ಮಂಗಳೂರು ವಿಭಾಗದಿಂದ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಬೆಂಗಳೂರಿಗೆ ತೆರಳುವ ವಿವಿಧ ಮಾದರಿಯ ಬಸ್ಸುಗಳಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ಶೇಕಡಾ ೧೦ ರಿಂದ ೧೫ರವರೆಗೆ ಪ್ರಯಾಣ ದರಗಳನ್ನು ಕಡಿತಗೊಳಿಸಿದೆ. ಇಂದಿನಿಂದ ಪರಿಷ್ಕೃತ ದರಗಳು ಜಾರಿಗೆ ಬರಲಿವೆ. ಅಂಬಾರಿ ಉತ್ಸವ ಮಂಗಳೂರಿನಿಂದ ೧ ಸಾವಿರದ ೩೫೦ ರೂಪಾಯಿ, ಉಡುಪಿಯಿಂದ ೧ ಸಾವಿರದ ೪೬೦ ಮತ್ತು ಕುಂದಾಪುರದಿಂದ ೧ ಸಾವಿರದ ೫೧೦ ರೂಪಾಯಿಗೆ  ಇಳಿಸಲಾಗಿದೆ. ಪಲ್ಲಕ್ಕಿ ಮಂಗಳೂರಿನಿಂದ ೯೫೦ ರೂಪಾಯಿ ಮತ್ತು ಕುಂದಾಪುರದ ೧ ಸಾವಿರದ ೧೦೦ ರೂಪಾಯಿಗೆ ಇಳಿಕೆಯಾಗಿದೆ. ರಾಜಹಂಸ ಮಂಗಳೂರಿನಿಂದ ೬೫೦ ರೂಪಾಯಿ ಮತ್ತು ಕುಂದಾಪುರದಿಂದ ೭೫೦ ರೂಪಾಯಿಗೆ ಇಳಿಕೆಯಾಗಿದೆ.

<><*<><>*><>

ಸರ್ಕಾರ ವಿದ್ಯುತ್ ಮಗ್ಗಗಳ ಮೀಸಲಾತಿ ಅಧಿ ನಿಯಮವನ್ನು ಜಾರಿಗೆ ತರುವ ಮೂಲಕ ನೇಕಾರರ ಹಿತರಕ್ಷಣೆ ಮಾಡಬೇಕು ಎಂದು ಒತ್ತಾಯಿಸಿ ದೊಡ್ಡಬಳ್ಳಾಪುರದಲ್ಲಿ ವಿವಿಧ ನೇಕಾರರ ಸಂಘಟನೆಗಳು ದೊಡ್ಡಬಳ್ಳಾಪುರ ಬಂದ್‌ಗೆ, ಕರೆ ನೀಡಿ ಪ್ರತಿಭಟನಾ ಮೆರವಣಿಗೆ ನಡೆಸಿತು. ಬಂದ್‌ಗೆ ವಿವಿಧ ಸಂಘಟನೆಗಳು ಹಾಗೂ ನೇಕಾರರು ಬೆಂಬಲ ವ್ಯಕ್ತಪಡಿಸಿದ್ದರೂ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಯಿತು. ವಿದ್ಯುತ್ ಮಗ್ಗಗಳ ನೇಕಾರರು ತಯಾರಿಸಿದ ಸೀರೆಗಳನ್ನು ಮಗ್ಗದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ತಯಾರಿಸಿ ಕಡಿಮೆ ಬೆಲೆಗೆ ಮಾರಾಟ ಮಾಡುತ್ತಿರುವುದರಿಂದ ನೇಕಾರರು ನಷ್ಟ ಅನುಭವಿಸುತ್ತಿದ್ದಾರೆ. ಮಗ್ಗಗಳ ಸೀರೆ ತಯಾರಿಕೆ ನಿಲ್ಲಬೇಕು. ವಿದ್ಯುತ್ ಮಗ್ಗಗಳ ಮೀಸಲಾತಿ ಅಧಿ ನಿಯಮವನ್ನು ಜಾರಿಗೆ ತರುವ ಮೂಲಕ ಬಿಕ್ಕಟ್ಟನ್ನು ಸರಿಪಡಿಸಲು ಸರ್ಕಾರ ಮಧ್ಯಪ್ರವೇಶಿಸಿಸಬೇಕು ಎಂದು ನೇಕಾರರು ಮನವಿ ಸಲ್ಲಿಸಿದ್ದಾರೆ.

<><*<><>*><>

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ, ಸರ್ಕಾರದ ಸೌಲಭ್ಯಗಳನ್ನು ತಲುಪಿಸುವ ಉದ್ದೇಶದಿಂದ, ಸ್ಥಿರ ಬೀದಿ ಬದಿ ವ್ಯಾಪಾರಸ್ಥರ ಸಮೀಕ್ಷೆ ಕಾರ್ಯ ಕೈಗೊಳ್ಳಲಾಗುತ್ತಿದೆ. ಸಮೀಕ್ಷೆ ವೇಳೆ ಅರ್ಹ ಸ್ಥಿರ ಬೀದಿ ಬದಿ ವ್ಯಾಪಾರಸ್ಥರು, ತಮ್ಮ ಅಗತ್ಯ ದಾಖಲಾತಿಗಳನ್ನು ಹಾಜರುಪಡಿಸಿ, ಸಮೀಕ್ಷೆಗೆ ಸಹಕರಿಸುವಂತೆ ಗದಗ ಬೆಟಗೇರಿ ನಗರಸಭೆ, ಪೌರಾಯುಕ್ತ ರಾಜಾರಾಮ್ ಪವಾರ್ ತಿಳಿಸಿದ್ದಾರೆ.

<><*<><>*><>

ವಿವಿಧ ಸಮಸ್ಯೆಗಳಿಂದ ನೊಂದು ಠಾಣೆಗೆ ಬರುವ ಸಾರ್ವಜನಿಕರಿಗೆ ಪೊಲೀಸ್ ಅಧಿಕಾರಿಗಳು ನ್ಯಾಯ ಒದಗಿಸುವ ಮೂಲಕ ಇಲಾಖೆಯ ಮೇಲಿನ ನಂಬಿಕೆಯನ್ನು ಉಳಿಸಿಕೊಳ್ಳಬೇಕು ಎಂದು ಕೋಲಾರದ ನೂತನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನಿಕಾ ಸಕ್ರಿವಾಲ ತಿಳಿಸಿದ್ದಾರೆ. ಕೋಲಾರ ಜಿಲ್ಲೆಯ ಶ್ರೀನಿವಾಸಪುರ ಪೊಲೀಸ್ ಠಾಣೆಗೆ ದಿಢೀರ್ ಭೇಟಿ ನೀಡಿ, ಕಾನೂನು ಸುವ್ಯವಸ್ಥೆ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿ ಬಳಿಕ ಮಾತನಾಡಿದ ಅವರು, ಠಾಣೆಗೆ ಯಾರೇ ಬಂದರೂ ಸೌಜನ್ಯದಿಂದ ಮಾತನಾಡುವಂತೆ ಪೊಲೀಸರಿಗೆ ಸಲಹೆ ನೀಡಿದ್ದಾರೆ. ಜಿಲ್ಲೆಯಲ್ಲಿ ಸಿಬ್ಬಂದಿ ಕೊರತೆಯಿದ್ದರೂ ಸಂಚಾರ ನಿಯಂತ್ರಣಕ್ಕೆ ಆದ್ಯತೆ ನೀಡಬೇಕು ಎಂದು ಹೇಳಿದ್ದಾರೆ. ಮುಂದಿನ ದಿನಗಳಲ್ಲಿ ಜಿಲ್ಲೆಯ ಎಲ್ಲಾ ಠಾಣೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಕಾನೂನು ಸುವ್ಯವಸ್ಥೆ ಬಲಪಡಿಸಲಾಗುವುದು ಎಂದು ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>